ಪ್ರವಾಸೋದ್ಯಮ ಇಲಾಖೆ
ಉಪನಿರ್ದೇಶಕರ ಕಛೇರಿ, ಪ್ರವಾಸೋದ್ಯಮ ಇಲಾಖೆ, ಪಿಇಎಸ್ ಇಂಜಿನಿಯರಿಂಗ್ ಕಾಲೇಜು ರಸ್ತೆ, ಮಂಡ್ಯ-571401
E-Mail: ddmandyatourism@gmail.com ದೂರವಾಣಿ ಮತ್ತು ಫ್ಯಾಕ್ಸ್ ಸಂಖ್ಯೆ: 08232-238377

ಸಂ:ಪ್ರಇ/ಉನಿ/ಮಂ/24/2018-19 -207 ದಿನಾಂಕ:24.09.2021

ಗೆ,

ಉಪ ಅರಣ್ಯ ಸಂರಕ್ಷಣಾಧಿಕಾರಿ,
ಅರಣ್ಯ ಇಲಾಖೆ,
ಮಂಡ್ಯ ಜಿಲ್ಲೆ

ಮಾನ್ಯರೇ,

ವಿಷಯ: ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ಹಾಲತಿ ಗ್ರಾಮದ ಪ್ರಮುಖ ಧಾರ್ಮಿಕ ಕ್ಷೇತ್ರ ಶ್ರೀ ಮಲ್ಲಿಕಾರ್ಜುನಸ್ವಾಮಿ ಬೆಟ್ಟಕ್ಕೆ ಸಂಪರ್ಕ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ನಿರಾಕ್ಷೇಪಣಾ ಪತ್ರವನ್ನು ಪಡೆಯುವ ಸಂಬಂಧ ಅಗತ್ಯ ದಾಖಲೆಗಳನ್ನು ಸಲ್ಲಿಸುತ್ತಿರುವ ಬಗ್ಗೆ

ಉಲ್ಲೇಖ: ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, (ಅರಣ್ಯ ಪಡೆಮುಖ್ಯಸ್ಥರು), ಅರಣ್ಯ ಇಲಾಖೆ, ಬೆಂಗಳೂರು ರವರ ಪತ್ರ ದಿನಾಂಕ:13.09.2021

***************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕಿನ ಹಾಲತಿ ಗ್ರಾಮದ ಪ್ರಮುಖ ಧಾರ್ಮಿಕ ಕ್ಷೇತ್ರ ಶ್ರೀ ಮಲ್ಲಿಕಾರ್ಜುನಸ್ವಾಮಿ ಬೆಟ್ಟಕ್ಕೆ ಸಂಪರ್ಕ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ರೂ.200.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ದೊರೆತಿರುತ್ತದೆ. ಅದರಂತೆ ಸದರಿ ಯೋಜನೆ ಕೈಗೊಳ್ಳಲು 0.38 ಹೆಕ್ಟೇರ ಅರಣ್ಯ ಭೂಮಿ ಅವಶ್ಯಕತೆಯಿದ್ದು, ಈ ಕಾಮಗಾರಿ ಅನುಷ್ಠಾನಗೊಳಿಸಲು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ನೀಡುವ ಸಂಬಂಧ ಕೆಲವು ಅಂಶಗಳಿಗೆ ಸ್ಪಷ್ಟೀಕರಣದೊಂದಿಗೆ ದಾಖಲೆಗಳನ್ನು ಸಲ್ಲಿಸುವಂತೆ ಉಲ್ಲೇಖಿತ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಉಲ್ಲೇಖಿತ ಪತ್ರದಲ್ಲಿ ಸೂಚಿಸಲಾಗಿರುವ ಅಂಶಗಳಿಗೆ ಅಗತ್ಯ ಸ್ಪಷ್ಟೀಕರಣವನ್ನು ಸಂಬಂಧಪಟ್ಟ ದಾಖಲೆಗಳೊಂದಿಗೆ ಸಿದ್ದಪಡಿಸಿ 07 ಪ್ರತಿಗಳಲ್ಲಿ ಧೃಢೀಕರಿಸಿ ಈ ಪತ್ರದೊಂದಿಗೆ ಲಗತ್ತಿಸಿ ಸಲ್ಲಿಸುತ್ತಾ, ಸದರಿ ಕಾಮಗಾರಿಯನ್ನು ಪ್ರಾರಂಭಿಸಲು ನಿರಾಕ್ಷೇಪಣಾ ಪತ್ರವನ್ನು ನೀಡುವಂತೆ ಮತ್ತೊಮ್ಮೆ ಕೋರಲಾಗಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

ಜಿಲ್ಲಾಧಿಕಾರಿಗಳ ಕಛೇರಿ
29 SEP 2021
ಮಂಡ್ಯ ಜಿಲ್ಲೆ, ಮಂಡ್ಯ

ಉಪ ನಿರ್ದೇಶಕರು
ಪ್ರವಾಸೋದ್ಯಮ ಇಲಾಖೆ
ಮಂಡ್ಯ ಜಿಲ್ಲೆ, ಮಂಡ್ಯ

ಲಗತ್ತು: 07 ಪ್ರತಿಗಳಲ್ಲಿ ದಾಖಲೆಗಳು

ಪ್ರತಿ: ಮಾನ್ಯ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ರವರ ಅವಗಾಹನೆಗೆ ಸಲ್ಲಿಸಿದೆ.

Scanned By Scanner Go